ಆ) ಸಂಚಾರ ದಟ್ಟಣೆಯನ್ನು ನಿಯಂತ್ರಿಸುವ ಕುರಿತು ಬೇರೆ ಕಡೆಯಿಂದ ವಾಹನಗಳ ಸಂಚಾರಕ್ಕಾಗಿ ಚಿಂಚೋಳಿ ಚಂದಾಪುರ ಸುತ್ತುವರಿದು ರಿಂಗ್ ರೋಡ್ ನಿರ್ಮಿಸುವ ಯಾವುದೇ ಪ್ರಸ್ತಾವನೆ ಇರುವುದಿಲ್ಲ.

ಹಾಲಿ ರಸ್ತೆಯಲ್ಲಿ ಅಪಘಾತ ತಡೆಯಲಯಲು ನಾಮಫಲಕಗಳನ್ನು ಹಾಗೂ ಸುರಕ್ಷತಾ ಕ್ರಮಗಳನ್ನು ಕೈಗೊಳ್ಳಲಾಗುವುದು.

ಇ) ರಿಂಗ್ ರೋಡ್ ನಿರ್ಮಿಸುವ ಪ್ರಸ್ತಾವನೆ ಇರುವುದಿಲ್ಲ.

ಸರ್ಕಾರಿ ವಸತಿ ಗೃಹಗಳ ಪುನರ್ ನಿರ್ಮಾಣ

5335 (5401); ಶ್ರೀ ಈಶ್ವರ್ ಭೀಮಣ್ಣ ಖಂಡ್ರೆ (ಭಾಲ್ಕಿ)

ಅ) ಭಾಲ್ಕಿ ತಾಲ್ಲೂಕಿನ ಸರ್ಕಾರಿ ಅಧಿಕಾರಿಗಳ ವಸತಿಗೃಹಗಳು ಶಿಥಿಲಾವಸ್ಥೆಯಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಈ ಸ್ಥಳದಲ್ಲಿಯೇ ಹೊಸ ವಸತಿಗೃಹ ನಿರ್ಮಾಣಕ್ಕೆ ಸಂಬಂಧಿಸಿದ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

ಇ) ಹಾಗಿದ್ದಲ್ಲಿ, ಈ ಸಾಲಿನಲ್ಲಿ ಕಾಮಗಾರಿಗಳನ್ನು ತೆಗೆದುಕೊಳ್ಳಲು ಕ್ರಮ ಜರುಗಿಸಲಾಗುವುದೇ;

ಡಾ: ಹೆಚ್. ಸಿ. ಮಹದೇವಪ್ಪ (ಲೋಕೋಪಯೋಗಿ ಸಚಿವರು)

ಅ) ಬೀದರ್ ಜಿಲ್ಲೆ ಭಾಲ್ಕಿ ತಾಲ್ಲೂಕಿನ ಲೋಕೋಪಯೋಗಿ ಇಲಾಖೆಯ ವ್ಯಾಪ್ತಿಯಲ್ಲಿರುವ ಸರ್ಕಾರಿ ಅಧಿಕಾರಿಗಳ ವಸತಿಗೃಹಗಳು ಶಿಥಿಲಾವಸ್ಥೆಯಲ್ಲಿರುವುದಿಲ್ಲ.

ಆ) ಉದ್ಭವಿಸುವುದಿಲ್ಲ.

ಇ) ಉದ್ಭವಿಸುವುದಿಲ್ಲ.